# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 161
ಉತ್ತರಿಸಬೇಕಾದ ದಿನಾಂಕ : 10.7.2018
ಸದಸ್ಯರ ಹೆಸರು : ಶ್ರೀ ಎನ್. ಅಪ್ಪಾಜಿಗೌಡ
ಉತ್ತರಿಸುವ ಸಚಿವರು : ವಸತಿ ಸಚಿವರು.

| ಕ್ರಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ವಿವಿಧ ವಸತಿ ಯೋಜನೆಗಳಡಿ ಕಳೆದ ನಾಲ್ಕು ವರ್ಷಗಳಲ್ಲಿ ಮಂಜೂರಾಗಿರುವ ಮನೆಗಳೆಷ್ಟು; (ಜಿಲ್ಲಾವಾರು ವಿವರ ನೀಡುವುದು) | ರಾಜ್ಯದಲ್ಲಿ ವಿವಿಧ ವಸತಿ ಯೋಜನೆಗಳಡಿ ಕಳೆದ ನಾಲ್ಕು ವರ್ಷಗಳಲ್ಲಿ 1,861,460 ಮನೆಗಳನ್ನು ಮಂಜೂರು ಮಾಡಲಾಗಿರುತ್ತದೆ.<br><br>ಜಿಲ್ಲಾವಾರು ವಿವರವನ್ನು **ಅನುಬಂಧ-1**ರಲ್ಲಿ ಒದಗಿಸಿದೆ. |
| ಆ) | ಕಳೆದ 4 ವರ್ಷಗಳಲ್ಲಿ ಮಂಡ್ಯ ಜಿಲ್ಲೆಯಲ್ಲಿ ವಿವಿಧ ಯೋಜನೆಗಳಡಿ ಮಂಜೂರಾಗಿರುವ ಮನೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು, ಗ್ರಾಮ ಪಂಚಾಯತಿವಾರು ವಿವರ ನೀಡುವುದು) | ಕಳೆದ ನಾಲ್ಕು ವರ್ಷಗಳಲ್ಲಿ ವಿವಿಧ ವಸತಿ ಯೋಜನೆಗಳಡಿ ಮಂಡ್ಯ ಜಿಲ್ಲೆಗೆ 54,034 ಮನೆಗಳನ್ನು ಮಂಜೂರು ಮಾಡಲಾಗಿದೆ.<br><br>ಮಂಜೂರು ಮಾಡಲಾದ 54,034 ಮನೆಗಳಲ್ಲಿ 45,758 ಫಲಾನುಭವಿಗಳು ಆಯ್ಕೆಯಾಗಿದ್ದು, 16,795 ಮನೆಗಳು ಪೂರ್ಣಗೊಂಡಿದ್ದು, ಉಳಿದಂತೆ 13,269 ಮನೆಗಳು ವಿವಿಧ ಹಂತದಲ್ಲಿ ಪ್ರಗತಿಯಲ್ಲಿದ್ದು, 11,828 ಮನೆಗಳು ಇನ್ನೂ ಪ್ರಾರಂಭವಾಗಬೇಕಿರುತ್ತವೆ ಹಾಗೂ 3,866 ಮನೆಗಳನ್ನು ಬ್ಲಾಕ್ ಮಾಡಲಾಗಿದೆ. |
| ಇ) | ಮಂಡ್ಯ ಜಿಲ್ಲೆಯಲ್ಲಿ ವಿವಿಧ ಯೋಜನೆಗಳಡಿ ಮಂಜೂರಾಗಿರುವ ಮನೆಗಳಲ್ಲಿ ಎಷ್ಟು ಮನೆಗಳ ಕಾಮಗಾರಿ ಪೂರ್ಣಗೊಂಡಿವೆ; ಇದರಲ್ಲಿ ವಾಸಿಸಲು ಅರ್ಹವಾದ ಮನೆಗಳೆಷ್ಟು; (ತಾಲ್ಲೂಕುವಾರು ವಿವರ ನೀಡುವುದು) | ಗ್ರಾಮೀಣ ಪ್ರದೇಶದ ತಾಲ್ಲೂಕುವಾರು, ಗ್ರಾಮ ಪಂಚಾಯತಿವಾರು ವಿವರವನ್ನು **ಅನುಬಂಧ-2** ರಲ್ಲಿ ಒದಗಿಸಲಾಗಿದೆ. ನಗರ ಪ್ರದೇಶದ ತಾಲ್ಲೂಕುವಾರು ವಿವರವನ್ನು **ಅನುಬಂಧ-3**ರಲ್ಲಿ ಒದಗಿಸಲಾಗಿದೆ. |
| ಈ) | ಅಪೂರ್ಣಗೊಂಡ ಮನೆಗಳ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು; (ವಿವರ ನೀಡುವುದು) | ಪ್ರಸ್ತುತ ವಿವಿಧ ವಸತಿ ಯೋಜನೆಗಳಡಿಯಲ್ಲಿ 7,069 ತಳಪಾಯ 2,525 ಗೋಡೆ 3,675 ಛಾವಣಿ ಹಂತದಲ್ಲಿದ್ದು, 11,828 ಮನೆಗಳು ಪ್ರಾರಂಭವಾಗಿರುವುದಿಲ್ಲ. ವಸತಿ ಯೋಜನೆಯಡಿ ನೀಡುವ ಸಹಾಯಧನದ ಜೊತೆಗೆ ಫಲಾನುಭವಿಗಳು ಸಹಾ ಸ್ವಲ್ಪ ಮಟ್ಟಿನ ವಂತಿಗೆಯನ್ನು ತೊಡಗಿಸಿಕೊಂಡು ಫಲಾನುಭವಿಗಳೇ ಸ್ವತಃ ಮನೆಗಳನ್ನು ನಿರ್ಮಿಸಿಕೊಳ್ಳಬೇಕಿರುತ್ತದೆ. ಮನೆ ನಿರ್ಮಾಣ ಪ್ರಕ್ರಿಯೆಯಲ್ಲಿ ಫಲಾನುಭವಿಗಳ ಆರ್ಥಿಕ ಸಮಸ್ಯೆಗಳು, ಮರಳಿನ ಅಭಾವ, ನೀರಿನ ಕೊರತೆ, ಹಾಗೂ ಮಳೆಗಾಲದಿಂದ ಮನೆ ನಿರ್ಮಾಣದ ಪ್ರಗತಿ ಕೆಲವು ತಿಂಗಳಲ್ಲಿ ನಿಧಾನವಾಗುತ್ತದೆ. ಆದಾಗ್ಯೂ ಸಹಾ ನಿಗದಿತ ಕಾಲಾವಧಿಯಲ್ಲಿ ಅಪೂರ್ಣಗೊಂಡ ಮನೆಗಳನ್ನು ಪೂರ್ಣಗೊಳಿಸಲು ಬೇಕಾದ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ. |
| ಉ) | ಮಂಡ್ಯ ಜಿಲ್ಲೆಯಲ್ಲಿ ವಿವಿಧ ಯೋಜನೆಗಳಡಿ ಮನೆಗಳ ನಿರ್ಮಾಣಕ್ಕೆ ಕಳೆದ ನಾಲ್ಕು ವರ್ಷಗಳಲ್ಲಿ ಮಂಜೂರಾದ ಹಣವೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು) | ಕಳೆದ ನಾಲ್ಕು ವರ್ಷಗಳಲ್ಲಿ ಮಂಡ್ಯ ಜಿಲ್ಲೆಯಲ್ಲಿ ವಿವಿಧ ವಸತಿ ಯೋಜನೆಗಳಡಿ ಜಿ.ಪಿ.ಎಸ್. ಆಧಾರಿತ ಪ್ರಗತಿಗನುಗುಣವಾಗಿ ಅರ್ಹ ಫಲಾನುಭವಿಗಳಿಗೆ ಒಟ್ಟು ರೂ.36703.30 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ. ಯೋಜನಾವಾರು ವಿವರ ಈ ಕೆಳಕಂಡಂತಿದೆ. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|

(ರೂ.ಲಕ್ಷಗಳಲ್ಲಿ)

| ಯೋಜನೆಗಳು | 2014-15 | 2015-16 | 2016-17 | 2017-18 | ಒಟ್ಟು |
|---|---|---|---|---|---|
| ಬಸವ ವಸತಿ ಯೋಜನೆ | 4769.38 | 4168.78 | 5373.22 | 8718.07 | 23029.4 |
| ದೇವರಾಜು ಅರಸು ಯೋಜನೆ | 0 | 0 | 5.5 | 40.45 | 45.95 |
| ಡಾ॥ಅಂಬೇಡ್ಕರ್ ನಿವಾಸ ಯೋಜನೆ (ಗ್ರಾ) | 0 | 0 | 774.06 | 2080.52 | 2854.58 |
| ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾ)/ಐ.ಎ.ವೈ. | 1973.23 | 2371.04 | 2512.06 | 1610.24 | 8466.58 |
| ವಿಶೇಷ ವಸತಿ ಯೋಜನೆ (ಗ್ರಾ) | 29.76 | 48.15 | 29.44 | 23.9 | 131.24 |
| ಡಾ॥ಅಂಬೇಡ್ಕರ್ ನಿವಾಸ ಯೋಜನೆ (ನಗರ) | 0 | 0 | 74.51 | 225.64 | 300.15 |
| ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ) | 0 | 0 | 1.5 | 345 | 346.5 |
| ವಿಶೇಷ ವಸತಿ ಯೋಜನೆ (ನ) | 0 | 1.1 | 1.1 | 0.55 | 2.75 |
| ವಾಜಪೇಯಿ ನಗರ ವಸತಿ ಯೋಜನೆ | 207.4 | 128.284 | 184.72 | 171.549 | 691.95 |
| ರಾಜೀವ ಆವಾಸ ಯೋಜನೆ | 0 | 0 | 0 | 834.18 | 834.18 |
| ಒಟ್ಟು | **6979.77** | **6717.35** | **8956.11** | **14050.1** | **36703.3** |

ತಾಲ್ಲೂಕುವಾರು ಮತ್ತು ಸ್ಥಳೀಯ ಸಂಸ್ಥೆಗಳವಾರು ಮಾಹಿತಿಯನ್ನು **ಅನುಬಂಧ-4** ಮತ್ತು **5** ರಲ್ಲಿ ಒದಗಿಸಿದೆ.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಊ) | ಮಂಡ್ಯ ಜಿಲ್ಲೆಯಲ್ಲಿ ಮನೆಗಳ ಫಲಾನುಭವಿಗಳ ಆಯ್ಕೆಯಲ್ಲಿ ಅಕ್ರಮಗಳು ನಡೆದಿರುವ ಬಗ್ಗೆ ದೂರುಗಳು ಬಂದಿದೆಯೇ; ಬಂದಿದ್ದಲ್ಲಿ, ತಾಲ್ಲೂಕುವಾರು, ಗ್ರಾಮ ಪಂಚಾಯತಿವಾರು ವಿವರ ನೀಡುವುದು? | ಮಂಡ್ಯ ಜಿಲ್ಲೆ ಮಂಡ್ಯ ತಾಲ್ಲೂಕಿನ ಹುಲಿವಾನ ಗ್ರಾಮ ಪಂಚಾಯತಿ ಹಾಗೂ ಮಳವಳ್ಳಿ ತಾಲ್ಲೂಕಿನ ಪಂಡಿತಹಳ್ಳಿ ಗ್ರಾಮ ಪಂಚಾಯತಿಗಳಲ್ಲಿ ಅನರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಿರುವುದಾಗಿ ದೂರಗಳು ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮಕ್ಕೆ ಬಂದಿದ್ದು, ನಿಗಮದಿಂದ ಈ ಬಗ್ಗೆ ಪರಿಶೀಲಿಸಿ, ನಿಯಮಾನುಸಾರ ಕ್ರಮ ಕೈಗೊಳ್ಳುವಂತೆ ಅನುಷ್ಠಾನಾಧಿಕಾರಿಗಳಿಗೆ ಪತ್ರ ಬರೆಯಲಾಗಿದೆ. |

ಸಂಖ್ಯೆ: ವಇ 134 ಹೆಚ್‌ಎಎಂ 2018

(ಯು.ಟಿ. ಅಬ್ದುಲ್ ಖಾದರ್)
ವಸತಿ ಸಚಿವರು.